ಚುಕ್ಕೆ ರಹಿತ ದಿನಾಂಕ: 29.3.2022 192

<u>**ಕರ್ನಾಟಕ ವಿಧಾನ ಪರಿಷತ್ತು**</u>

<u>**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ವೈ.ಎ. ನಾರಾಯಣಸ್ವಾಮಿ ಇವರು ನಿಯಮ–72 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಉತ್ತರ.**</u>

<u>ವಿಷಯ:</u> ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಆರಿಕುಂಟೆ ಗ್ರಾಮ ಪಂಚಾಯಿತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪಂಚಾಯತಿ (ಪಿಡಿಓ) ಗಳಿಂದ ಹಣದುರುಪಯೋಗ, ಭ್ರಷ್ಟಾಚಾರ ಹಾಗೂ ಆಶ್ರಯ ಯೋಜನೆಗಳಲ್ಲಿ ಆಗಿರುವ ಅಕ್ರಮಗಳು ಹಾಗೂ ಕಾನೂನುಗಳನ್ನು ಉಲ್ಲಂಘಿಸಿರುವ ಬಗ್ಗೆ.

<u>**ಉತ್ತರ:**</u> ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಆರಿಕುಂಟೆ ಗ್ರಾಮ ಪಂಚಾಯಿತಿಯಲ್ಲಿ 2015–16ನೇ ಸಾಲಿನಲ್ಲಿ ಡಾ: ಬಿ.ಅರ್. ಅಂಬೇಡ್ಕರ್ ಆವಾಸ್ ಯೋಜನೆಯಡಿಯಲ್ಲಿ ಶ್ರೀಮತಿ ಪದ್ಮಮ್ಮ ಕೋಂ ನಾರಾಯಣಸ್ವಾಮಿ ಮತ್ತು ಶ್ರೀಮತಿ ಸಲ್ಲಾಪುರಮ್ಮ ಕೋಂ ಮುನಿಸ್ವಾಮಿ ರವರಿಗೆ 2 ಮನೆಯನ್ನು ಮಂಜೂರು ಮಾಡಿರುವುದಕ್ಕೆ ಸಂಬಂಧಿಸಿದ ಆರೋಪಗಳ ಬಗ್ಗೆ ಹಿಂದಿನ ಆರಿಕುಂಟೆ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ವಿಚಾರಣಾ ಹಂತದಲ್ಲಿರುತ್ತದೆ.

ಆರಿಕುಂಟೆ ಗ್ರಾಮ ಪಂಚಾಯತಿ ಗಣಕಯಂತ್ರ ನಿರ್ವಾಹಕರಾದ ಶ್ರೀ ಮುನಿಕದಿರಪ್ಪ ರವರು 2008–09ನೇ ಸಾಲಿನಲ್ಲಿ ಅವರ ಅತ್ತಿಗೆಯಾದ ಶ್ರೀಮತಿ ಪದ್ಮಮ್ಮ ಕೋಂ ನಾರಾಯಣಸ್ವಾಮಿ ರವರ ಹೆಸರಿನಲ್ಲಿ ಆಶ್ರಯ ಯೋಜನೆಯಡಿಯಲ್ಲಿ ಅಕ್ರಮ ಎಸಗಿರುವ ಆರೋಪಗಳ ಬಗ್ಗೆ ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ವಿಚಾರಣೆ ಹಂತದಲ್ಲಿರುತ್ತದೆ.

ಸಂಖ್ಯೆ: ಗ್ರಾಅಪ 176 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.